## ಅಸೆಂಬ್ಲಿ ಮತ ಎಣಿಕೆ ಇದೇ ಮೊದಲ ಬಾರಿಗೆ ಎನ್ಐಟಿಕೆಯಲ್ಲಿ

# ಭದ್ರತೆಯೊಂದಿಗೆ ಮತ ಎಣಿಕೆಗೆ ಸಿದ್ಧತೆ

**ಮಹಾನಗರ, ಮೇ 12:** ನಗರದಿಂದ ಸುಮಾರು 12 ಕಿ.ಮೀ ದೂರದಲ್ಲಿರುವ ಎನ್ಐಟಿಕೆ ಸುರತ್ಕಲ್ ಇಲ್ಲಿ ಇದೇ ಮೊದಲ ಬಾರಿಗೆ ವಿಧಾನಸಭಾ ಚುನಾವಣೆಯ ಮತ ಎಣಿಕೆಗೆ ಸೂಕ್ತ ಸಿದ್ಧತೆಗಳನ್ನು ಮಾಡಿಕೊಳ್ಳಲಾಗಿದೆ.

2019ರಲ್ಲಿ ಮೊದಲ ಬಾರಿಗೆ ಎನ್ಐಟಿಕೆಯಲ್ಲಿ ಲೋಕಸಭಾ ಚುನಾವಣೆಯ ಮತ ಎಣಿಕೆ ನಡೆದಿತ್ತು. ಇಡೀ ಹೆದ್ದಾರಿಯನ್ನೇ ಬ್ಲಾಕ್ ಮಾಡಿ, ಸಂಚಾರವನ್ನು ನಿಯಂತ್ರಿಸಿದ್ದ ಪೊಲೀಸ್ ಇಲಾಖೆ, ಮತ ಎಣಿಕೆಗೆ ಸೂಕ್ತ ಭದ್ರತಾ ವ್ಯವಸ್ಥೆ ಕಲ್ಪಿಸಿತ್ತು.

2018ರಲ್ಲಿ ವಿಧಾನಸಭೆಯ ಮತ ಎಣಿಕೆಯು ಬೊಂದೇಲ್ ಮಹಾತ್ಮಗಾಂಧಿ ಸಂಯುಕ್ತ ಕಾಲೇಜಿನಲ್ಲಿ ನಡೆದಿತ್ತು. ಇದೇ ಮೊದಲ ಬಾರಿಗೆ ವಿಧಾನಸಭೆ ಚುನಾವಣೆ ಮತ ಎಣಿಕೆ ನಗರದ ಹೊರಭಾಗಕ್ಕೆ ಸ್ಥಳಾಂತರಗೊಂಡಿದೆ.

### ನಿರೀಕ್ಷೆ-ಕುತೂಹಲಕ್ಕೆ ಇಂದು ತೆರೆ

ಮೇ 13ರಂದು ಬೆಳಗ್ಗೆ 7 ಗಂಟೆಗೆ ಮತ ಎಣಿಕೆ ಪ್ರಕ್ರಿಯೆ ಪ್ರಾರಂಭಗೊಳ್ಳಲಿದೆ. ಆ ಮೂಲಕ, ಬಹುದಿನಗಳ ನಿರೀಕ್ಷೆ-ಕುತೂಹಲಕ್ಕೆ ತೆರೆ ಬೀಳಲಿದೆ. ಸುರತ್ಕಲ್ ಎನ್ಐಟಿಕೆ ಮತ ಎಣಿಕೆ ಕೇಂದ್ರದ ಸುತ್ತ ವ್ಯಾಪಕ ಪೊಲೀಸ್ ಬಂದೋಬಸ್ತ್ ನಿಯೋಜಿಸಲಾಗಿದೆ. ಬುಧವಾರ ಭದ್ರತಾ ವ್ಯವಸ್ಥೆಯನ್ನು ಮತ್ತಷ್ಟು ಪರೀಕ್ಷೆಗೆ ಒಳಪಡಿಸಲಾಯಿತು. ಶ್ವಾನದಳ ತಂಡವು ಮತ ಎಣಿಕೆ ಕೇಂದ್ರದ ಸುತ್ತ ಪರೀಕ್ಷೆ ನಡೆಸಿತು. ಮತ ಎಣಿಕೆ ಕೇಂದ್ರಕ್ಕೆ ಹೋಗುವ ಎರಡೂ ಗೇಟ್‌ಗಳಲ್ಲೂ ಮೆಟಲ್ ಡಿಟೆಕ್ಟರ್ ಅಳವಡಿಸಲಾಗಿದೆ. ಎರಡು ಹಂತದ ಭದ್ರತಾ ವ್ಯವಸ್ಥೆ ಮಾಡಿಕೊಳ್ಳಲಾಗಿದೆ.

ಹಿರಿಯ ಪೊಲೀಸ್ ಅಧಿಕಾರಿಗಳು ಸ್ಥಳಕ್ಕೆ ಆಗಮಿಸಿ ಮಾರ್ಗದರ್ಶನ ನೀಡಿದರು. ಸರ್ವಿಸ್ ರಸ್ತೆಗಳಲ್ಲಿ ನೋ ಪಾರ್ಕಿಂಗ್ ಬೋರ್ಡ್, ಜನರು ಗುಂಪು ಗೂಡದಂತೆ ಬ್ಯಾರಿಕೇಡ್ ಅಳವಡಿಸಲಾಗಿದೆ. ಕಾಲೇಜಿನ ವಿದ್ಯಾರ್ಥಿಗಳಿಗೆ ರಜೆ ಸಾರಲಾಗಿದ್ದು ಎನ್ಐಟಿಕೆ ಮುಂಭಾಗದ ಅಂಗಡಿಗಳನ್ನು ಮುಚ್ಚಲಾಗಿದೆ. ರಾಜ್ಯ ಪೊಲೀಸ್, ಕೆಎಸ್ಆರ್‌ಪಿ, ಐಟಿಬಿಪಿ ತುಕಡಿಗಳನ್ನು ಭದ್ರತೆಗಾಗಿ ನಿಯೋಜಿಸಲಾಗಿದೆ. ಮತ ಎಣಿಕೆ ಕೇಂದ್ರಕ್ಕೆ ಬರುವವರಿಗೆ ಸರಕಾರಿ ಅಧಿಕೃತ ಗುರುತು ಪತ್ರ ನೀಡಲಾಗಿದ್ದು, ಇತರರಿಗೆ ಪ್ರವೇಶ ನಿರ್ಬಂಧಿಸಲಾಗಿದೆ.

### 8 ಗಂಟೆಯಿಂದ ಮತ ಎಣಿಕೆ ಆರಂಭ

ಬೆಳಗ್ಗೆ 7ರ ಸುಮಾರಿಗೆ ಮತಯಂತ್ರಗಳನ್ನು ಇರಿಸಿರುವ ಎನ್ಐಟಿಕೆಯ ಸ್ಟ್ರಾಂಗ್ ರೂಂಗಳನ್ನು ಚುನಾವಣಾ ವೀಕ್ಷಕರು, ಅಭ್ಯರ್ಥಿಗಳು, ಏಜೆಂಟರುಗಳ ಸಮ್ಮುಖದಲ್ಲಿ ತೆರೆಯಲಾಗುವುದು. ಬೆಳಗ್ಗೆ 8 ಗಂಟೆಯಿಂದ ಮತ ಎಣಿಕೆ ಆರಂಭಗೊಳ್ಳಲಿದೆ. ಮತ ಎಣಿಕೆ ಬಗ್ಗೆ ಸಾರ್ವಜನಿಕರಿಗೆ ಮಾಹಿತಿ ನೀಡಲು ಧ್ವನಿವರ್ಧಕಗಳನ್ನು ಅಳವಡಿಸಲಾಗಿದೆ.

ಇವಿಎಂ/ ವಿವಿಪಾಟ್, ಚುನಾವಣಾ ದಾಖಲೆಗಳನ್ನು ಇಡಲಾದ ಭದ್ರತಾ ಕೊಠಡಿಗಳಿರುವ ಮತ ಎಣಿಕೆ ಕೇಂದ್ರದ ಆವರಣದ 100 ಮೀ. ವ್ಯಾಪ್ತಿಯೊಳಗೆ ಅನಧಿಕೃತ ವ್ಯಕ್ತಿಗಳು ಮತ್ತು ವಾಹನಗಳು ಪ್ರವೇಶಿಸದಂತೆ ತಡೆಬೇಲಿಯನ್ನು ನಿರ್ಮಿಸಿ ಭದ್ರತಾ ವಲಯ ಸ್ಥಾಪಿಸಲಾಗಿದೆ. ಮತ ಎಣಿಕೆಯ ಪ್ರವೇಶ ದ್ವಾರದ ಬಳಿ ಗೇಟು ನಿರ್ಮಿಸಿ ಅದನ್ನು ಹಾದು ಹೋಗುವ ಜಿಲ್ಲಾ ಚುನಾವಣಾಧಿಕಾರಿ/ ಚುನಾವಣಾಧಿಕಾರಿ ಇವರಿಂದ ನಿಯೋಜಿತ ಅಧಿಕಾರಿ/ ಸಿಬಂದಿಯವರು ಹೊಂದಿರುವ ಭಾವಚಿತ್ರವಿರುವ ಗುರುತಿನ ಚೀಟಿ ಪರಿಶೀಲಿಸಿ ಅನುಮತಿ ಸುವ ಬಗ್ಗೆ ಸ್ಥಳೀಯ ಪೊಲೀಸರು ಕ್ರಮ ಕೈಗೊಳ್ಳಲಿದ್ದಾರೆ.



ಎನ್ಐಟಿಕೆಯ ಮತ ಎಣಿಕೆ ಕೇಂದ್ರದಲ್ಲಿ ಬಿಗಿ ಭದ್ರತೆ.

### ಎಲೆಕ್ಟ್ರಾನಿಕ್ ಗ್ಯಾಜೆಟ್ ನಿಷೇಧ

ಮತ ಎಣಿಕೆ ಕೇಂದ್ರವನ್ನು ಪ್ರವೇಶಿಸುವ ವ್ಯಕ್ತಿಗಳು ಬೆಂಕಿ ಪೆಟ್ಟಿಗೆ, ಶಸ್ತ್ರಾಸ್ತ್ರ ಇತ್ಯಾದಿ ಪ್ರತಿಬಂಧಕ ವಸ್ತುಗಳನ್ನು ತೆಗೆದುಕೊಂಡು ಹೋಗುವುದನ್ನು ತಡೆಯುವುದು ಹಾಗೂ ಈ ಹಿನ್ನೆಲೆಯಲ್ಲಿ ತಪಾಸಣೆ ನಡೆಸಲು ಪುರುಷ ಮತ್ತು ಮಹಿಳಾ ಪೊಲೀಸ್ ಸಿಬಂದಿಯನ್ನು ನಿಯೋಜಿಸಲಾಗಿದೆ. ಮತ ಎಣಿಕೆ ಕೇಂದ್ರದೊಳಗೆ ಮೊಬೈಲ್ / ಐಪ್ಯಾಡ್ / ಲ್ಯಾಪ್‌ಟಾಪ್, ಇ-ವಾಚ್ ಇತ್ಯಾದಿ ಎಲೆಕ್ಟ್ರಾನಿಕ್ ಗ್ಯಾಜೆಟ್ ತೆಗೆದುಕೊಂಡು ಹೋಗುವುದನ್ನು ನಿಷೇಧಿಸಲಾಗಿದೆ. ಮಾಧ್ಯಮ ಪ್ರತಿನಿಧಿಗಳು ಉಪಕರಣಗಳನ್ನು ಮೀಡಿಯಾ ಕೊಠಡಿಯಲ್ಲಿ ಉಪಯೋಗಿಸಲು ಅನುಮತಿ ನೀಡಲಾಗಿದೆ.

### ಈ ಬಾರಿ ಅಂಚೆ ಮತದಾನ ಹೆಚ್ಚಳ

ಮೊದಲಿಗೆ ಅಂಚೆ ಮತಗಳ ಲೆಕ್ಕಾಚಾರ ನಡೆಯಲಿದ್ದು ಆ ಬಳಿಕ ಇವಿಎಂ ಯಂತ್ರ ಗಳ ಮತ ಎಣಿಕೆ ನಡೆಸಲಾಗುತ್ತದೆ. ಈ ಬಾರಿ 80ರ ಮೇಲ್ಪಟ್ಟವರು ಮನೆಯಿಂದಲೇ ಅಂಚೆ ಮತದಾನ ಮಾಡಿದ ಕಾರಣ ಅಂಚೆ ಮತ ಹೆಚ್ಚಳವಾಗಿದೆ. ಸುಮಾರು 22,000 ಅಂಚೆ ಮತಗಳಿವೆ. ಅಂಚೆಮತ ಪತ್ರಗಳ ಎಣಿಕೆಗೆ ಪ್ರತ್ಯೇಕ 5 ಟೇಬಲ್‌ಗಳನ್ನು ಇರಿಸಲಾಗಿದೆ. ಬೆಳಗ್ಗೆ 8 ಗಂಟೆಯಿಂದ ಅಂಚೆ ಮತದಾನದ ಎಣಿಕೆ ಆರಂಭವಾಗಲಿದೆ. 8.30 ಅನಂತರ ಮತಯಂತ್ರಗಳಲ್ಲಿನ ಮತ ಎಣಿಕೆ ಶುರುವಾಗಲಿದೆ.

Vijayavani, Date:13/05/23, p, no-01